**JANUARY 29, 2025**

**AKASHAVANI - DHARWAD**

**PRADESH SAAMACHARA (KANNADA) 7.05 A.M**

**ಮುಖ್ಯಾಂಶಗಳು:**

- **ಎಲ್ಲಾ ಇಲಾಖೆಗಳೂ ಬಡ್ತಿಯಲ್ಲಿ ಮೀಸಲಾತಿ ಪಾಲಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ.**
- **ನೀರಿನ ಸಂಪರ್ಕ ಹಾಗೂ ಬಳಕೆಯ ನಿಖರ ಮಾಹಿತಿ ಪಡೆಯಲು ಅಗತ್ಯ ಕ್ರಮ – ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್.**
- **ಖರೀದಿ ಕೇಂದ್ರದ ಮೂಲಕ ರೈತರಿಂದ ಕಡಲೆ ಖರೀದಿಸಿ, ಹಣ ಪಾವತಿಸುವುದು ರಾಜ್ಯ ಸರ್ಕಾರದ ಜವಾಬ್ದಾರಿ – ಸಚಿವ ಪ್ರಲ್ಹಾದ ಜೋಶಿ.**
- **ಇಸ್ರೋ ಸಂಸ್ಥೆಯ ಮೂಲಕ ಎನ್.ವಿ.ಎಸ್–2 ಉಪಗ್ರಹ ಹೊತ್ತ ಜಿ.ಎಸ್.ಎಲ್.ವಿ.ಎಫ್– 15 ರಾಕೆಟ್ ಯಶಸ್ವಿ ಉಡಾವಣೆ.**

**ಈಗ ವಾರ್ತೆಗಳ ವಿವರ**

<><><>

**ಎಲ್ಲಾ ಇಲಾಖೆಗಳೂ ಬಡ್ತಿಯಲ್ಲಿ** ಮೀಸಲಾತಿಯನ್ನು ಚಾಚೂ ತಪ್ಪದೆ ಪಾಲಿಸಬೇಕು. ಪರಿಶಿಷ್ಟ ಸಮುದಾಯದವರಿಗೆ ಅವಕಾಶ ತಪ್ಪಿಸಲು ಅಧಿಕಾರಿಗಳು ಕುಟಿಲ ನೀತಿ ಅನುಸರಿಸುವಂತಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಆಯೋಜಿಸಲಾದ ರಾಜ್ಯಮಟ್ಟದ ಜಾಗೃತ ಮತ್ತು ಉಸ್ತುವಾರಿ ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಇಲಾಖಾವಾರು ಮುಂಬಡ್ತಿಯಲ್ಲಿ ಆಗಿರುವ ಅನ್ಯಾಯಗಳ ಬಗ್ಗೆ ಪರಿಶೀಲಿಸಲು ಪ್ರತ್ಯೇಕ ಪರಿಶೀಲನೆ ಸಭೆ ಕರೆಯುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಪ್ರತಿ ಆರು ತಿಂಗಳಿಗೊಮ್ಮೆ ಉಸ್ತುವಾರಿ ಸಮಿತಿ ಸಭೆಯನ್ನು ಕಡ್ಡಾಯವಾಗಿ ಕರೆಯಲಾಗುವುದು. ಈ ಸಭೆಗಳಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆ ಕಂಡು ಬಂದಲ್ಲಿ, ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಸಿದರು.

<><><>

**ಕುಡಿಯುವ ನೀರಿನ ದರ ಹೆಚ್ಚಳ** ಕುರಿತು ವರದಿ ನೀಡಲು ಸೂಚಿಸಲಾಗಿದೆ. ವರದಿ ನೀಡಿದ ಬಳಿಕ ಅದರ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಜಲಮಂಡಳಿ ಮತ್ತು ಪ್ರದೇಶಾಭಿವೃದ್ಧಿ ಮಂಡಳಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಅವರು ಈ ವಿಷಯ ತಿಳಿಸಿದರು. ನೀರಿನ ಅಕ್ರಮ ಸಂಪರ್ಕಗಳ ಸಕ್ರಮೀಕರಣ, ನೀರಿನ ಸಂಪರ್ಕ ಹಾಗೂ ಬಳಕೆಯ ನಿಖರವಾದ ಲೆಕ್ಕವನ್ನು ಪಡೆಯಲು ಅಗತ್ಯ ಕ್ರಮ ತೆಗೆದುಕೊಳ್ಳಲಾಗುವುದು. ಮುಂಬರುವ ಬೇಸಿಗೆ ವೇಳೆಗೆ, ಬೆಂಗಳೂರಿನಲ್ಲಿ ಕುಡಿಯುವ ನೀರಿಗೆ ಯಾವುದೇ ರೀತಿಯ ಸಮಸ್ಯೆ ಉಂಟಾಗಬಾರದು ಎಂದು ಸೂಚಿಸಲಾಗಿದೆ. ಜೊತೆಗೆ ಅಂತರ್ಜಲ ಹೆಚ್ಚಳಕ್ಕೆ ಯಾವುದಾದರೂ ಕೆರೆ ತುಂಬಿಸಬೇಕಿದ್ದರೆ ಈ ಕುರಿತು ಶೀಘ್ರ ಕ್ರಮ ತೆಗೆದುಕೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ವಸತಿ ಸಮುಚ್ಚಯಗಳು ನೀರಿನ ಸಂಪರ್ಕಗಳನ್ನು ಕಡ್ಡಾಯವಾಗಿ ತೆಗೆದುಕೊಳ್ಳಬೇಕು ಎಂದು ಸಹ ಸೂಚಿಸಲಾಗಿದೆ ಎಂದರು.

<><><>

**ಕರ್ನಾಟಕ ಸರ್ಕಾರದ ಪ್ರಸ್ತಾವದಂತೆ, ಕರ್ನಾಟಕದಲ್ಲಿ 2024-25ರ ಹಿಂಗಾರು** ಋತುವಿನಲ್ಲಿ ಬೆಳೆದ ಕಡಲೆಯನ್ನು ಬೆಂಬಲ ಬೆಲೆ ಯೋಜನೆಯಡಿ ಖರೀದಿಗೆ ಭಾರತ ಸರ್ಕಾರದ ಕೃಷಿ ಸಚಿವಾಲಯ ಅನುಮತಿ ನೀಡಿದೆ ಎಂದು ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನ ಖಾತೆ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಮಾಹಿತಿ ನೀಡಿರುವ ಅವರು, ಮುಕ್ತ ಮಾರುಕಟ್ಟೆಯಲ್ಲಿ ಈ ಬೆಳೆಗಳಿಗೆ ಬೆಲೆ ಕಡಿಮೆ ಇರುವುದರಿಂದ ಕನಿ ್ಠ ಬೆಂಬಲ ಬೆಲೆಯಡಿ ಖರೀದಿಸಿ, ರೈತರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದಲೇ ಕೇಂದ್ರ ಸರ್ಕಾರ ಈ ಕ್ರಮ ಕೈಗೊಂಡಿದೆ. ರಾಜ್ಯ ಸರ್ಕಾರ ತನ್ನ ಪ್ರಸ್ತಾವದಲ್ಲಿ ನಮೂದಿಸಿದಂತೆ 96 ಸಾವಿರದ 498 ಮೆಟ್ರಿಕ್ ಟನ್ ಗುಣಮಟ್ಟದ ಕಡಲೆ ಕಾಳು ಖರೀದಿಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಈಗ ಜಿಲ್ಲಾವಾರು 90 ದಿನದೊಳಗಾಗಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಿ, ರೈತರಿಂದ ಖರೀದಿಸಿ, ಹಣ ತಲುಪುವಂತೆ ಮಾಡುವುದು ರಾಜ್ಯ ಸರ್ಕಾರದ ಜವಾಬ್ದಾರಿ ಆಗಿದೆ. ಈ ಕೂಡಲೇ ಈ ನಿಟ್ಟಿನಲ್ಲಿ ಅವರು ಕಾರ್ಯಪ್ರವೃತ್ತರಾಗಬೇಕಾಗಿದೆ ಎಂದು ತಿಳಿಸಿದ್ದಾರೆ.

<><><>

**ನಿಯಮಾವಳಿ ಪ್ರಕಾರ** ಅನುಮೋದಿತ ಕ್ರಿಯಾ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಬೇಕು ಹಾಗೂ ಬಿಡುಗಡೆ ಆಗುವ ಅನುದಾನವನ್ನು ಪೂರ್ಣವಾಗಿ ಬಳಸಿ, ಕಾಮಗಾರಿ ಮುಕ್ತಾಯಗೊಳಿಸಬೇಕು ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ವಿವಿಧ ಇಲಾಖೆಗಳ ಮೂಲಕ ಅಭಿವೃದ್ಧಿ ಯೋಜನೆಗಳಿಗೆ ಸರಕಾರ ಬಿಡುಗಡೆ ಮಾಡಿರುವ ಅನುದಾನ, ಮಾರ್ಚ 31 ರೊಳಗೆ ಪೂರ್ಣ ಬಳಕೆಯಾಗದೆ, ಬಾಕಿ ಉಳಿಸಿದಲ್ಲಿ ಸಂಬಂಧಿಸಿದ ಇಲಾಖೆ ಅಧಿಕಾರಿಯನ್ನು ಜವಾಬ್ದಾರರನ್ನಾಗಿಸಿ, ಸೂಕ್ತ ಕ್ರಮ ತೆಗೆದುಕೊಳ್ಳುವುದಾಗಿ ಹೇಳಿದರು.

<><><>

**ಫೆಬ್ರವರಿ 11 ರಿಂದ 14 ರವರೆಗೆ ಬೆಂಗಳೂರಿನಲ್ಲಿ ಆಯೋಜಿಸಿರುವ 'ಇನ್ವೆಸ್ಟ್ ಕರ್ನಾಟಕ** 2025 – ಜಾಗತಿಕ ಹೂಡಿಕೆದಾರರ ಸಮಾವೇಶವನ್ನು' ಯಶಸ್ವಿಗೊಳಿಸಲು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಖಾತೆ ಸಚಿವ ಎಂ.ಬಿ.ಪಾಟೀಲ್, ಕೈಗಾರಿಕಾ ಇಲಾಖೆಯ ಅಧಿಕಾರಿಗಳೊಂದಿಗೆ 2 ದಿನಗಳ ಮುಂಬೈ ಪ್ರವಾಸ ಕೈಗೊಂಡಿದ್ದಾರೆ. ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಮಾಹಿತಿ ನೀಡಿರುವ ಸಚಿವರು, ಆದಿತ್ಯ ಬಿರ್ಲಾ ಸಮೂಹ ಸಂಸ್ಥೆಯ ಹಿಂಡಲ್ಕೊ ಕಂಪೆನಿಯ ಸಿ.ಇ.ಒ. ಸೌರಭ್ ಖೇಡೇಕರ್ ಅವರೊಂದಿಗೆ ಮಾತುಕತೆ ನಡೆಸಿ, ರಾಜ್ಯದಲ್ಲಿ ಮತ್ತ ್ಟ ಹೂಡಿಕೆಗೆ ಹಾಗೂ ವಿಸ್ತರಣೆಗಿರುವ ವ್ಯಾಪಕ ಅವಕಾಶಗಳ ಕುರಿತು ತಿಳಿಸಿದರು. ಹಿಂಡಲ್ಕೊ ಕಂಪೆನಿಯು ಅಲ್ಯೂಮಿನಿಯಂ ಮತ್ತು ತಾಮ್ರ ಕ್ಷೇತ್ರದಲ್ಲಿ ಹೆಸರು ಮಾಡಿರುವ ಜಾಗತಿಕ ಮಟ್ಟದ ಕಂಪೆನಿಯಾಗಿದ್ದು, ಇಂದಿನ ಮಾತುಕತೆಯು ರಾಜ್ಯದ ಉತ್ಪಾದನಾ ಕ್ಷೇತ್ರವನ್ನು ಬಲಪಡಿಸಲು ಹೆಚ್ಚಿನ ಸಹಕಾರಿಯಾಗಲಿದೆ. ಮುಂಬೈನ ವ್ಯಾನಿಟಿ ಕೇಸ್ ಕಂಪೆನಿಯ ಮುಖ್ಯಸ್ಥ ಸಮೀರ್ ಕೊಠಾರಿಯವರೊಂದಿಗೆ ಕೈಗಾರಿಕಾ ಇಲಾಖೆಯ ನಿಯೋಗದೊಂದಿಗೆ ಮಹತ್ವದ ಚರ್ಚೆ ನಡೆಸಲಾಯಿತು. ಕಂಪನಿಯು ರಾಜ್ಯದಲ್ಲಿ ಪಾದರಕ್ಷೆಗಳ ತಯಾರಿಕಾ ಘಟಕ ಸ್ಥಾಪಿಸಲು ಆಸಕ್ತಿ ವ್ಯಕ್ತಪಡಿಸಿದೆ. ಹುಬ್ಬಳ್ಳಿ-ಧಾರವಾಡದಲ್ಲಿ FMCG ಕ್ಲಸ್ಟರ್ ಅನ್ನು ಅಭಿವೃದ್ಧಿಪಡಿಸುವ ರಾಜ್ಯದ ಚಿಂತನೆಗೆ ಪೂರಕವಾಗಿ ವ್ಯಾನಿಟಿ ಕೇಸ್ ಸ್ಪಂದಿಸಿದೆ ಎಂದು ತಿಳಿಸಿದ್ದಾರೆ

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..**

<><><>

**ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ X ಖಾತೆ @airnews_dharwad ಹಾಗೂ**

**ನಮ್ಮ ಫೇಸ್ಬುಕ್ ಖಾತೆ Airrnu Dharwad ಅನುಸರಿಸಿ.**

<><><>

**ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ – ಇಸ್ರೋ ಇಂದು** ಆಂಧ್ರಪ್ರದೇಶದ ಶ್ರೀಹರಿಕೋಟಾ ಬಾಹ್ಯಾಕಾಶ ಕೇಂದ್ರದಿಂದ ಎನ್.ವಿ.ಎಸ್–2 ಉಪಗ್ರಹ ಹೊತ್ತ ಜಿ.ಎಸ್.ಎಲ್.ವಿ.ಎಫ್–15 ವಾಹಕವು ಯಶಸ್ವಿಯಾಗಿ ನಭಕ್ಕೆ ಚಿಮ್ಮಿತು. ಇದು ಜಿ.ಎಸ್.ಎಲ್.ವಿ ರಾಕೆಟ್‌ನ 15ನೇ ಹಾರಾಟವಾಗಿದೆ.

<><><>

**ಮಕ್ಕಳಿಗೆ ಅಗತ್ಯವಾದ ಎಲ್ಲಾ ಸೌಲಭ್ಯಗಳನ್ನು** ತಮ್ಮ ಸರ್ಕಾರ ಒದಗಿಸಿದ್ದು, ಅದರ ಸದುಪಯೋಗ ಪಡೆದುಕೊಳ್ಳಬೇಕು. ಶಿಕ್ಷಕರು ಮಕ್ಕಳ ಹಾಜರಾತಿ ಬಗ್ಗೆ ಗಮನ ಹಾಗೂ ವಿದ್ಯಾರ್ಥಿಗಳ ಉಜ್ವಲ ಭವಿ ್ಯದೆಡೆ ಗಮನ ಹರಿಸಬೇಕು ಎಂದು ಸಚಿವ ಎಸ್.ಮಧು ಬಂಗಾರಪ್ಪ ಹೇಳಿದ್ದಾರೆ.ಸಾಗರ ತಾಲೂಕು ಕಾನಲೆ ಗ್ರಾಮದಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನೂತನವಾಗಿ ನಿರ್ಮಿಸಲಾದ ಶಾಲಾ ಕೊಠಡಿ ಉದ್ಘಾಟಿಸಿ ಮಾತನಾಡಿದ ಅವರು, ಮುಂಬರುವ ದಿನಗಳಲ್ಲಿ ಅಭಿವೃದ್ಧಿ ಕಾರ್ಯಗಳು ತ್ವರಿತ ಗತಿಯಲ್ಲಿ ಸಾಗುವಂತೆ ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರಿಂದ ಕುಂದು ಕೊರತೆ, ಅಹವಾಲು ಸ್ವೀಕರಿಸಿ, ಸಮಸ್ಯೆಗಳ ಪರಿಹಾರದೆಡೆ ಗಮನ ಹರಿಸಲಾಗುವುದು ಹಾಗೂ ಅಗತ್ಯವಿರುವ ಶಾಲೆಗಳಿಗೆ ಹೆಚ್ಚಿನ ಅನುದಾನ ಒದಗಿಸಲಾಗುವುದು ಎಂದರು.

<><><>

**ನಂದಿಗಳನ್ನು ಬಳಸಿಕೊಂಡು ಪಾರಂಪರಿಕ** ಕೃಷಿ ಪದ್ಧತಿಯನ್ನು ಪುನಃ ಆರಂಭಿಸಿ, ಸಾವಯವ ಆಹಾರ ಪದ್ಧತಿಗೆ ಹೆಚ್ಚು ಪ್ರಾಮುಖ್ಯತೆ ನೀಡಬೇಕು ಎಂಬ ಉದ್ದೇಶದಿಂದ, ಗದಗನ ಕಪ್ಪತಗುಡ್ಡ ಶ್ರೀ ನಂದಿವೇರಿ ಸಂಸ್ಥಾನಮಠದ ಶ್ರೀ ಶಿವಕುಮಾರ ಸ್ವಾಮೀಜಿಯವರ ನೇತೃತ್ವದಲ್ಲಿ ಆಯೋಜನೆಗೊಂಡ ಮೂರು ದಿನಗಳ ನಂದಿಭೂಷಿತ ಕಪ್ಪತ ಜ್ಯೋತಿ ಯಾತ್ರೆಯು ಸಂಪನ್ನಗೊಂಡಿತು. ನಂದಿಭೂಷಿತ ಯಾತ್ರೆಯ ಸಂಕಲ್ಪ ಹಾಗೂ ರೈತರ ಉತ್ಸಾಹದ ಬಗ್ಗೆ ಪ್ರದೇಶ ಸಮಾಚಾರಕ್ಕೆ ಮಾಹಿತಿ ನೀಡಿದ್ದಾರೆ ಗದಗಿನ ಕಡಕೋಳ ಗ್ರಾಮದ ಸಾವಯವ ರೈತ ರುದ್ರಣ್ಣ ಗುಳುಗುಳಿ ಅವರು.

**ಧ್ವನಿ– ರುದ್ರಣ್ಣ ಗುಳುಗುಳಿ**

<><><>

**ವಿವಿಧ ಅಭಿವೃದ್ಧಿ ನಿಗಮಗಳಿಗೆ ಅನುದಾನ ಬಿಡುಗಡೆ ಮಾಡಿ, ಬಡವರು, ದಿನಗೂಲಿ** ನೌಕರರು, ಕೃಷಿ ಕಾರ್ಮಿಕರು ಸಾಲಕ್ಕಾಗಿ ಮೈಕ್ರೋ ಫೈನಾನ್ಸ್ ಕಂಪನಿಗಳನ್ನು ಅವಲಂಬಿಸದಂತೆ ಕ್ರಮ ಕೈಗೊಳ್ಳಬೇಕು ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಪೊಲೀಸ್ ಸಹಾಯವಾಣಿ ತೆರೆದು ಮೈಕ್ರೋ ಫೈನಾನ್ಸ್ ಕಂಪನಿಗಳ ವಸೂಲಿಗಾರರು ಮನೆ ಬಾಗಿಲಿಗೆ ಬಂದರೆ ಸಾರ್ವಜನಿಕರು ಪೊಲೀಸರಿಗೆ ಕರೆ ಮಾಡಿ ತಿಳಿಸುವ ವ್ಯವಸ್ಥೆ ರೂಪಿಸಬೇಕು ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ತಿಳಿಸಿದ್ದಾರೆ.

<><><>

**ಮಾಧ್ಯಮ ಮಾನ್ಯತಾ ಪತ್ರ ಹೊಂದಿರುವ ಗ್ರಾಮೀಣ ಪತ್ರಕರ್ತರಿಗೆ, ಉಚಿತ ಬಸ್‌ಪಾಸ್** ಸೌಲಭ್ಯವನ್ನು ರಾಜ್ಯ ಸರ್ಕಾರ ಕಲ್ಪಿಸಿದೆ. ಅರ್ಹ ಪತ್ರಕರ್ತರು ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ರಾಜ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ತಿಳಿಸಿದೆ.

<><><>

**ಈಗ ಸಂಕ್ಷಿಪ್ತ ಸುದ್ದಿಗಳು**

**ಕೋಲಾರ ನಗರಾಭಿವೃದ್ಧಿ ಪ್ರಾಧಿಕಾರದ** ವ್ಯಾಪ್ತಿಯಲ್ಲಿ ವಸತಿ ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ನಿರ್ಮಿಸುತ್ತಿರುವ ಪ್ರತಿಯೊಂದು ವಾಣಿಜ್ಯ ಮಳಿಗೆಗಳು, ನಿವೇಶನಗಳಿಗೆ ಅನುಮತಿ ನೀಡಲು 30 ಅಡಿಗಳ ರಸ್ತೆ, ಚರಂಡಿ ಕಡ್ಡಾಯ ವಾಗಿರಬೇಕು. ಇಲ್ಲದಿದ್ದರೆ ಅನುಮತಿ ನಿರಾಕರಿಸಬೇಕು ಎಂದು ಶಾಸಕ ಕೊತ್ತೂರು ಮಂಜುನಾಥ್ ತಿಳಿಸಿದ್ದಾರೆ.

<><><>

**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ನೌಕರರು** ಭಾರತೀಯ ಸ್ಟೇಟ್ ಬ್ಯಾಂಕ್‌ನಲ್ಲಿ ಖಾತೆ ಹೊಂದಿದ್ದಲ್ಲಿ ಅವರಿಗೆ ಪ್ರಿಮಿಯಂ ರಹಿತ 1 ಕೋಟಿ ರೂಪಾಯಿವರೆಗಿನ ಅಪಘಾತ ವಿಮೆ ಹಾಗೂ ಸಹಜ ಸಾವಿಗೆ 6 ಲಕ್ಷ ರೂಪಾಯಿ ಪರಿಹಾರ ಒದಗಿಸುವ ಒಪ್ಪಂದಕ್ಕೆ ಸಾರಿಗೆ ಖಾತೆ ಸಚಿವ ರಾಮಲಿಂಗಾರೆಡ್ಡಿ ನೇತೃತ್ವದಲ್ಲಿ, ಕೆಕೆಆರ್‌ಟಿಸಿ ಹಾಗೂ ಎಸ್‌ಬಿಐ ಅಧಿಕಾರಿಗಳು ಒಪ್ಪಂದಕ್ಕೆ ಸಹಿ ಹಾಕಿದ್ದಾರೆ.

<><><>